## 2025 ರ ಕರ್ನಾಟಕ ಅಧಿನಿಯಮ ಸಂಖ್ಯೆ: 14

## ಬೆಂಗಳೂರು ಅರಮನೆ (ಭೂ ಬಳಕೆ ಮತ್ತು ನಿಯಂತ್ರಣ) ಅಧಿನಿಯಮ, 2025

### ಪ್ರಕರಣಗಳ ಪಟ್ಟಿ

**ಪ್ರಕರಣಗಳು**


1. ಸಂಕ್ಷಿಪ್ತ ಹೆಸರು, ಅನ್ವಯ ಮತ್ತು ಪ್ರಾರಂಭ
2. ಪರಿಭಾಷೆಗಳು
3. ಮೂಲಸೌಕರ್ಯ ಯೋಜನೆಗಾಗಿ ಭೂಮಿಯ ಬಳಕೆ
4. ಬಳಕೆಗಾಗಿ ಸಂದಾಯ ಮಾಡಬಹುದಾದ ನಷ್ಟಪರಿಹಾರ
5. ಕ್ಲೇಮುದಾರರ ನಡುವೆ ವಿವಾದಗಳು ಉದ್ಭವವಾದಾಗ ನಷ್ಟಪರಿಹಾರದ ಸಂದಾಯ
6. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ
7. ಅಧಿನಿಯಮದ ಅಧ್ಯಾರೋಹಿ ಪರಿಣಾಮ
8. ನಿರಸನ ಮತ್ತು ಉಳಿಸುವಿಕೆಗಳು


### ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

**I**

**2025ರ ಕರ್ನಾಟಕ ಅಧಿನಿಯಮ ಸಂಖ್ಯೆ:14** ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರಡಿ ಆರ್ಜಿಸಿರುವ ಬೆಂಗಳೂರು ಅರಮನೆಯ ಭೂ ಬಳಕೆ ಮತ್ತು ನಿಯಂತ್ರಣ ಹಾಗೂ ಬೆಂಗಳೂರು ಅರಮನೆಗೆ ಸಂಬಂಧಿಸಿರುವ, ಈಗ ಕರ್ನಾಟಕ ರಾಜ್ಯದೊಂದಿಗೆ ನಿಹಿತವಾಗಿರುವ ಭೂಮಿಯ ನಷ್ಟಪರಿಹಾರವನ್ನು ನಿರ್ಧರಿಸಲು ಒಂದು ವಿಧೇಯಕ

ಬೆಂಗಳೂರು ಅರಮನೆಯ ಒಟ್ಟಾರೆ ವ್ಯಾಪ್ತಿಯ 472 ಎಕರೆಗಳು ಮತ್ತು 16 ಗುಂಟೆಗಳ ಒಟ್ಟು ಮೌಲ್ಯವನ್ನು ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ 8 ಮತ್ತು 9ನೇ ಪ್ರಕರಣಗಳ ಅನುಸಾರವಾಗಿ ಹನ್ನೊಂದು ಕೋಟಿ ರೂಪಾಯಿಗಳೆಂದು ನಿರ್ಧರಿಸಲಾಗಿರುವುದರಿಂದ;

ಮತ್ತು ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ ಸಾಂವಿಧಾನಿಕ ಸಿಂಧುತ್ವವನ್ನು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ಎತ್ತಿಹಿಡಿದಿರುವುದರಿಂದ ಹಾಗೂ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಮೂಲಕ ಅಪೀಲಿನಲ್ಲಿ ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ ಕಾರ್ಯಾಚರಣೆಯ ಮೇಲೆ ಯಾವುದೇ ತಡೆಯಾಜ್ಞೆ ಇಲ್ಲದಿರುವುದರಿಂದ;

ಮತ್ತು ಮಾನ್ಯ ಸರ್ವೋಚ್ಚ ನ್ಯಾಯಾಲಯವು 2021ರ ನ್ಯಾಯಾಂಗ ನಿಂದನಾ ಪ್ರಕರಣ ಸಂ. 688 ಇತ್ಯಾದಿರಲ್ಲಿನ ದಿನಾಂಕ 10.12.2024ರ ತೀರ್ಪಿನ ಮೂಲಕ ರಸ್ತೆ ಅಗಲೀಕರಣದ ಉದ್ದೇಶಕ್ಕಾಗಿ ಗುರುತಿಸಲಾದ ಬೆಂಗಳೂರು ಅರಮನೆಯ ಭಾಗದ ಮೌಲ್ಯವನ್ನು ನಿರ್ಣಯಿಸಿ, ಕರ್ನಾಟಕ ಸ್ಟ್ಯಾಂಪು

ಅಧಿನಿಯಮ, 1957 (1957ರ ಕರ್ನಾಟಕ ಅಧಿನಿಯಮ 34)ರ 45ಬಿ ಪ್ರಕರಣದ ಪ್ರಕಾರ ಅಕ್ಕಪಕ್ಕದ ಪ್ರದೇಶಗಳ ಚಾಲ್ತಿಯಲ್ಲಿರುವ ಮಾರ್ಗಸೂಚಿ ಮೌಲ್ಯಕ್ಕೆ ಅನುಸಾರವಾಗಿ ವರ್ಗಾಯಿಸಬಹುದಾದ ಅಭಿವೃದ್ಧಿ ಹಕ್ಕುಗಳನ್ನು ಮಂಜೂರು ಮಾಡುವಂತೆ ನಿರ್ದೇಶಿಸಿರುವುದರಿಂದ;

ಮತ್ತು ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪು ರಾಜ್ಯ ಸರ್ಕಾರದ ಬೊಕ್ಕಸದ ಮೇಲೆ ಹಾಗೂ ಬೆಂಗಳೂರು ನಗರದ ನಗರ ಯೋಜನೆಯ ಮೇಲೆ ಗಂಭೀರವಾದ ಪರಿಣಾಮವನ್ನು ಬೀರುವುದರಿಂದ ಮುಂದುವರೆದು ಇದು ಬೆಂಗಳೂರು ಅರಮನೆ (ಆರ್ಜನ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ ಅನುಸಾರ ನಿರ್ಧರಿಸಲಾದ ಒಟ್ಟು ನಷ್ಟ ಪರಿಹಾರಕ್ಕೆ ಸುಸಂಗತವಾಗದಿರುವುದರಿಂದ;

ಮತ್ತು ಬೆಂಗಳೂರು ಅರಮನ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ ಸಾಂವಿಧಾನಿಕ ಸಿಂಧುತ್ವಕ್ಕೆ ಸಂಬಂಧಿಸಿದಂತೆ ಸಿವಿಲ್ ಅಪೀಲುಗಳು ಮಾನ್ಯ ಸರ್ವೋಚ್ಚ ನ್ಯಾಯಾಲಯದ ಪರ್ಯಾಲೋಚನೆಗೆ ಬಾಕಿಯಿರುವುದರಿಂದ, ಮತ್ತು ಅಭಿವೃದ್ಧಿ ಹಕ್ಕುಗಳ ವರ್ಗಾವಣೆಯು ವಿಪರ್ಯಯಗೊಳ್ಳದಿರುವ ಪ್ರಕ್ರಿಯೆಯಾಗಿದ್ದು, ಅದು ರಾಜ್ಯದ ಮೇಲೆ ತೀವ್ರ ಸಂಕೀರ್ಣ ಪರಿಣಾಮವನ್ನು (ramification) ಬೀರುವುದರಿಂದ ವಿಧೇಯಕವು ಅವಶ್ಯಕವೆಂದು ಪರಿಗಣಿಸಲಾಗಿದೆ.

ವಿಷಯವು ತುರ್ತುಸ್ವರೂಪದ್ದಾದ್ದರಿಂದ ಮತ್ತು ಕರ್ನಾಟಕ ವಿಧಾನಮಂಡಲದ ಉಭಯ ಸದನಗಳು ಅಧಿವೇಶನದಲ್ಲಿ ಇಲ್ಲದಿದ್ದುದರಿಂದ, ಬೆಂಗಳೂರು ಅರಮನೆ (ಭೂ ಬಳಕೆ ಮತ್ತು ನಿಯಂತ್ರಣ) ಅಧ್ಯಾದೇಶ, 2025 (2025ರ ಕರ್ನಾಟಕ ಅಧ್ಯಾದೇಶ ಸಂ.01)ನ್ನು ಮೇಲಿನ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಪ್ರಖ್ಯಾಪಿಸಲಾಗಿತ್ತು.

ಆದ್ದರಿಂದ ಈ ವಿಧೇಯಕ**.**

[2025ರ ವಿಧಾನ ಸಭೆಯ ವಿಧೇಯಕ ಸಂಖ್ಯೆ: 05 ,ಕಡತ ಸಂಖ್ಯೆ:ಸಂವ್ಯಶಾಇ 02 ಶಾಸನ 2025]
[ಭಾರತ ಸಂವಿಧಾನದ 7ನೇ ಅನುಸೂಚಿಯ 2ನೇ ಪಟ್ಟಿಯ 18 ಮತ್ತು 63 ಹಾಗೂ 3ನೇ ಪಟ್ಟಿಯ 42ನೇ ನಮೂದನೆಯಡಿ ಬರುತ್ತದೆ.]
[ಕರ್ನಾಟಕ ರಾಜ್ಯ ಪತ್ರದ ಭಾಗIVಎ ವಿಶೇಷ ರಾಜ್ಯಪತ್ರಿಕೆ ಸಂಖ್ಯೆ:137, ದಿನಾಂಕ:12.03.2025 ರಲ್ಲಿ ಪ್ರಕಟಗೊಂಡಿದೆ]

**II**

**2025ರ ತಿದ್ದುಪಡಿ ಅಧಿನಿಯಮ ಸಂಖ್ಯೆ: 35** ಬೆಂಗಳೂರು ಅರಮನೆ (ಅರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996ರಡಿಯಲ್ಲಿ ಸ್ವಾಧೀನಪಡಿಸಿಕೊಂಡ ಭೂಮಿಯ ಭಾಗದಲ್ಲಿ 15 ಎಕರೆಗಳು 17.5 ಗುಂಟೆಗಳ ವ್ಯಾಪ್ತಿಯಷ್ಟನ್ನು ಮೂಲಸೌಕರ್ಯ ಯೋಜನೆಗೆ ಬಳಸಿಕೊಳ್ಳಲು ಉದ್ದೇಶಿಸಲಾಗಿತ್ತು ಅದರಲ್ಲಿ 1217.41 ಚದರ ಮೀಟರ್ ಗಳಷ್ಟನ್ನು ಮಾತ್ರ ವಾಸ್ತವವಾಗಿ ಬಳಸಲಾಗಿರುವುದರಿಂದು

ಮತ್ತು ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಅಧಿನಿಯಮ, 1961 (1963ರ ಕರ್ನಾಟಕ ಅಧಿನಿಯಮ 11)ರ 14ಬಿ ಪ್ರಕರಣದಡಿಯಲ್ಲಿನ ಯಾವುದೇ ವರ್ಗಾಯಿಸಬಹುದಾದ ಅಭಿವೃದ್ಧಿ ಹಕ್ಕುಗಳು, ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 180ರ ಅನುಸಾರ ಸರ್ಕಾರದಲ್ಲಿ ನಿಹಿತವಾಗಿರುವ ಭೂಮಿಗೆ ಅನ್ವಯಿಸುವುದಿಲ್ಲವಾದ್ದರಿಂದ;

ಮತ್ತು ಬೆಂಗಳೂರು ಅರಮನೆ (ಅರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ ಅನುಸೂಚಿ 1ರಲ್ಲಿ ವಿವರಿಸಲಾದ ಭೂಮಿಯ ಯಾವು ಭಾಗವನ್ನು ಬಳಸಿಕೊಳ್ಳಲು ರಾಜ್ಯ ಸರ್ಕಾರಕ್ಕೆ ಅಧಿಕಾರ ನೀಡುವುದು ಅಗತ್ಯವಾಗಿರುವುದರಿಂದ;

ಮತ್ತು ರಾಜ್ಯ ಸರ್ಕಾರವು ಯಾವುದೇ ಮೂಲಸೌಕರ್ಯ ಯೋಜನೆಗಾಗಿ ಭೂಮಿಯ ಭಾಗವನ್ನು ಬಳಸಲಾಗಿದ್ದರೆ, ಯಾವುದೇ ಅಂಥ ಮೂಲಸೌಕರ್ಯ ಯೋಜನೆಯಲ್ಲಿ ಪೂರ್ಣವಾಗಿ ಅಥವಾ ಭಾಗಶಃ ಮುಂದುವರಿಯದಿರಲು ಸಾರ್ವಜನಿಕ ಹಿತಾಸಕ್ತಿಯಲ್ಲಿ ಹಾಗೆ ಸಲಹೆ ನೀಡಲಾಗಿದ್ದರೆ, ಅದು ಅದನ್ನು ತೀರ್ಮಾನಿಸಬಹುದಾಗಿರುವುದರಿಂದ;

ಮತ್ತು ರಾಜ್ಯ ಸರ್ಕಾರವು ಅಗತ್ಯವಿದ್ದಲ್ಲಿ, ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ ಅನುಸೂಚಿ 1ರಲ್ಲಿ ವಿವರಿಸಿದ ಭೂಮಿಯನ್ನು ಒಳಗೊಂಡು, ರಾಜ್ಯ ಸರ್ಕಾರದಲ್ಲಿ ನಿಹಿತವಾಗಿರುವ ಭೂಮಿಯ ಭಾಗಕ್ಕೆ ಸಂಬಂಧಿಸಿದಂತೆ ಯಾವುದೇ ಮೂಲಸೌಕರ್ಯ ಯೋಜನೆಯಲ್ಲಿ ಮುಂದುವರಿಯಲು ಪರಿಗಣಿಸಬಹುದಾಗಿರುವುದರಿಂದ;

ಹಾಗೂ ಯಾವುದೇ ಸದರಿ ಬಳಕೆಗಾಗಿ ಪಾವತಿಸಲಾದ ಯಾವುದೇ ನಷ್ಟ ಪರಿಹಾರವನ್ನು, ವಾಸ್ತವಿಕವಾಗಿ ಬಳಸಲಾದ ಪ್ರದೇಶಕ್ಕೆ ಸಂಬಂಧಿಸಿದಂತೆ, ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ 8ನೇ ಪ್ರಕರಣದಲ್ಲಿರುವಂತೆ ಪಾವತಿಸಬೇಕಾದ ಮೊತ್ತಕ್ಕೆ ಅನುಗುಣವಾಗಿ ಲೆಕ್ಕಹಾಕುವುದು, ಮತ್ತು ಯಾವುದೇ ಅಂಥ ಪಾವತಿಸತಕ್ಕ ನಮ್ಮ ಪರಿಹಾರವನ್ನು, ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ ಅಡಿಯಲ್ಲಿನ ಒಟ್ಟಾರೆ ನಮ್ಮ ಪರಿಹಾರದಿಂದ ಪ್ರಮಾಣಾನುಸಾರವಾಗಿ ಕಟಾವಣೆಯಾಗತಕ್ಕದ್ದು;

ಮತ್ತು ಈಗ ಈ ಪ್ರಸ್ತಾವಿತ ಶಾಸನವು ಮೇಲಿನ ಉದ್ದೇಶಗಳನ್ನು ಸಾಧಿಸಲು ಮತ್ತು ಬೆಂಗಳೂರು ಅರಮನೆ (ಭೂ ಬಳಕೆ ಮತ್ತು ನಿಯಂತ್ರಣ) ಅಧಿನಿಯಮ, 2025 (2025ರ ಕರ್ನಾಟಕ ಅಧಿನಿಯಮ 14)ನ್ನು ಅದಕ್ಕೆ ಅನುಗುಣವಾಗಿ ತಿದ್ದುಪಡಿ ಮಾಡಲು ಉದ್ದೇಶಿಸಿದೆ.

ಆದ್ದರಿಂದ ಈ ವಿಧೇಯಕ.

[2025ರ ವಿಧಾನ ಸಭೆಯ ವಿಧೇಯಕ ಸಂಖ್ಯೆ:27, ಕಡತ ಸಂಖ್ಯೆ:ಸಂವ್ಯಶಾಇ 32 ಶಾಸನ 2025]
[ಭಾರತ ಸಂವಿಧಾನದ 7ನೇ ಅನುಸೂಚಿಯ 2ನೇ ಪಟ್ಟಿಯ 18 ಮತ್ತು 63 ಹಾಗೂ 3ನೇ ಪಟ್ಟಿಯ 42ನೇ ನಮೂದನೆಯಡಿ ಬರುತ್ತದೆ.]
[ಕರ್ನಾಟಕ ರಾಜ್ಯ ಪತ್ರದ ಭಾಗ IVಎ ವಿಶೇಷ ರಾಜ್ಯ ಪತ್ರಿಕೆ ಸಂಖ್ಯೆ:233, ದಿನಾಂಕ:15.04.2025 ರಲ್ಲಿ ಪ್ರಕಟಗೊಂಡಿದೆ]

# 2025 ರ ಕರ್ನಾಟಕ ಅಧಿನಿಯಮ ಸಂಖ್ಯೆ: 14

**(2025** ರ ಮಾರ್ಚ್ ತಿಂಗಳ **12** ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ**)**

## ಬೆಂಗಳೂರು ಅರಮನೆ (ಭೂ ಬಳಕೆ ಮತ್ತು ನಿಯಂತ್ರಣ) ಅಧಿನಿಯಮ, 2025

**(2025** ರ ಮಾರ್ಚ್ ತಿಂಗಳ **12** ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮೋದನೆಯನ್ನು ಪಡೆಯಲಾಗಿದೆ**)**

(2025ರ ಅಧಿನಿಯಮ ಸಂಖ್ಯೆ 35ರಲ್ಲಿ ತಿದ್ದುಪಡಿಯಾದಂತೆ)

ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರಡಿ ಆರ್ಜಿಸಿರುವ ಬೆಂಗಳೂರು ಅರಮನೆಯ ಭೂ ಬಳಕೆ ಮತ್ತು ನಿಯಂತ್ರಣ ಹಾಗೂ ಬೆಂಗಳೂರು ಅರಮನೆಗೆ ಸಂಬಂಧಿಸಿರುವ, ಈಗ ಕರ್ನಾಟಕ ರಾಜ್ಯದೊಂದಿಗೆ ನಿಹಿತವಾಗಿರುವ ಭೂಮಿಯ ನಷ್ಟಪರಿಹಾರವನ್ನು ನಿರ್ಧರಿಸಲು ಒಂದು ಅಧಿನಿಯಮ.

ಬೆಂಗಳೂರು ಅರಮನೆಯ ಒಟ್ಟಾರೆ ವ್ಯಾಪ್ತಿಯ 472 ಎಕರೆಗಳು ಮತ್ತು 16 ಗುಂಟೆಗಳ ಒಟ್ಟು ಮೌಲ್ಯವನ್ನು ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ 8 ಮತ್ತು 9ನೇ ಪ್ರಕರಣಗಳ ಅನುಸಾರವಾಗಿ ಹನ್ನೊಂದು ಕೋಟಿ ರೂಪಾಯಿಗಳೆಂದು ನಿರ್ಧರಿಸಲಾಗಿರುವುದರಿಂದ;

ಮತ್ತು ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ ಸಾಂವಿಧಾನಿಕ ಸಿಂಧುತ್ವವನ್ನು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ಎತ್ತಿಹಿಡಿದಿರುವುದರಿಂದ ಹಾಗೂ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಮೂಲಕ ಅಪೀಲಿನಲ್ಲಿ ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ ಕಾರ್ಯಾಚರಣೆಯ ಮೇಲೆ ಯಾವುದೇ ತಡೆಯಾಜ್ಞೆ ಇಲ್ಲದಿರುವುದರಿಂದ;

ಮತ್ತು ಮಾನ್ಯ ಸರ್ವೋಚ್ಚ ನ್ಯಾಯಾಲಯವು 2021ರ ನ್ಯಾಯಾಂಗ ನಿಂದನಾ ಪ್ರಕರಣ ಸಂ. 688 ಇತ್ಯಾದಿಯಲ್ಲಿನ ದಿನಾಂಕ:10.12.2024ರ ತೀರ್ಪಿನ ಮೂಲಕ ರಸ್ತೆ ಅಗಲೀಕರಣದ ಉದ್ದೇಶಕ್ಕಾಗಿ ಗುರುತಿಸಲಾದ ಬೆಂಗಳೂರು ಅರಮನೆಯ ಭಾಗದ ಮೌಲ್ಯವನ್ನು ನಿರ್ಣಯಿಸಿ, ಕರ್ನಾಟಕ ಸ್ಟಾಂಪು ಅಧಿನಿಯಮ, 1957 (1957ರ ಕರ್ನಾಟಕ ಅಧಿನಿಯಮ 34)ರ 45ಬಿ ಪ್ರಕರಣದ ಪ್ರಕಾರ ಅಕ್ಕಪಕ್ಕದ ಪ್ರದೇಶಗಳ ಚಾಲ್ತಿಯಲ್ಲಿರುವ ಮಾರ್ಗಸೂಚಿ ಮೌಲ್ಯಕ್ಕೆ ಅನುಸಾರವಾಗಿ ವರ್ಗಾಯಿಸಬಹುದಾದ ಅಭಿವೃದ್ಧಿ ಹಕ್ಕುಗಳನ್ನು ಮಂಜೂರು ಮಾಡುವಂತೆ ನಿರ್ದೇಶಿಸಿರುವುದರಿಂದ;

ಮತ್ತು ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪು ರಾಜ್ಯ ಸರ್ಕಾರದ ಬೊಕ್ಕಸದ ಮೇಲೆ ಹಾಗೂ ಬೆಂಗಳೂರು ನಗರದ ನಗರ ಯೋಜನೆಯ ಮೇಲೆ ಗಂಭೀರವಾದ ಪರಿಣಾಮವನ್ನು ಬೀರುವುದರಿಂದ. ಮುಂದುವರೆದು ಇದು ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ ಅನುಸಾರ ನಿರ್ಧರಿಸಲಾದ ಒಟ್ಟು ನಷ್ಟ ಪರಿಹಾರಕ್ಕೆ ಸುಸಂಗತವಾಗದಿರುವುದರಿಂದ;

ಮತ್ತು ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ ಸಾಂವಿಧಾನಿಕ ಸಿಂಧುತ್ವಕ್ಕೆ ಸಂಬಂಧಿಸಿದಂತೆ ಸಿವಿಲ್ ಅಪೀಲುಗಳು ಮಾನ್ಯ ಸರ್ವೋಚ್ಚ ನ್ಯಾಯಾಲಯದ ಪರ್ಯಾಲೋಚನೆಗೆ ಬಾಕಿಯಿರುವುದರಿಂದ, ಮತ್ತು ಅಭಿವೃದ್ಧಿ ಹಕ್ಕುಗಳ ವರ್ಗಾವಣೆಯು ವಿಪರ್ಯಯಗೊಳ್ಳದಿರುವ ಪ್ರಕ್ರಿಯೆಯಾಗಿದ್ದು, ಅದು ರಾಜ್ಯದ ಮೇಲೆ ತೀವ್ರ ಸಂಕೀರ್ಣ ಪರಿಣಾಮವನ್ನು (ramification) ಬೀರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು, ಅನ್ವಯ ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಬೆಂಗಳೂರು ಅರಮನೆ (ಭೂ ಬಳಕೆ ಮತ್ತು ನಿಯಂತ್ರಣ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಈ ಅಧಿನಿಯಮವು ಬೆಂಗಳೂರು ಅರಮನೆಗೆ ಅನ್ವಯವಾಗತಕ್ಕದ್ದು.

(3) ಇದು 2025ರ ಜನವರಿ 27ನೇ ದಿನಾಂಕದಿಂದ ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

2. **ಪರಿಭಾಷೆಗಳು**.- ಈ ಅಧಿನಿಯಮದಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಬೆಂಗಳೂರು ಅರಮನೆ" ಯು ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ 2ನೇ ಪ್ರಕರಣದ ಖಂಡ (2)ರಲ್ಲಿ ಪರಿಭಾಷಿಸಲಾದಂತೆ ಅದೇ ಅರ್ಥವನ್ನು ಹೊಂದಿರತಕ್ಕದ್ದು.

(ಬಿ) "ಮೂಲಸೌಕರ್ಯ ಯೋಜನೆ"ಯು ಹೆಚ್ಚಿನ ಸಾರ್ವಜನಿಕ ಹಿತಾಸಕ್ತಿಯಲ್ಲಿನ ಯಾವುದೇ ಮೂಲ ಸೌಕರ್ಯ ಯೋಜನೆಯನ್ನು ಒಳಗೊಳ್ಳತಕ್ಕದ್ದು;

(ಸಿ) "ಕ್ಲೇಮುದಾರರು" ಎಂಬುದು,-

(i) ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ 2ನೇ ಪ್ರಕರಣದ (5) ನೇ ಖಂಡದಲ್ಲಿ ಪರಿಭಾಷಿಸಲಾದಂತೆ "ಕಾನೂನುಸಮ್ಮತ ಪ್ರತಿನಿಧಿಗಳು" ಮತ್ತು "ವಾರಸುದಾರರು" ಎಂಬ; ಹಾಗೂ

(ii) ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ 2ನೇ ಪ್ರಕರಣದ (6) ನೇ ಖಂಡದಲ್ಲಿ ಪರಿಭಾಷಿಸಲಾದಂತೆ "ಇತರರು" "ಇತರ ವ್ಯಕ್ತಿಗಳು" ಮತ್ತು "ಇತರ ಹಿತಾಸಕ್ತ ವ್ಯಕ್ತಿಗಳು" ಎಂಬ,

- ಅದೇ ಅರ್ಥವನ್ನು ಹೊಂದಿರತಕ್ಕದ್ದು;

[1][(ಡಿ) ನಷ್ಟಪರಿಹಾರ"ವು ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ 8ನೇ ಪ್ರಕರಣದಲ್ಲಿರುವ ಅದೇ ಅರ್ಥವನ್ನು ಹೊಂದಿರತಕ್ಕದ್ದು; ಮತ್ತು, ಬಳಸಿರುವ ಅಥವಾ ಬಳಸಲಾಗುವ ಬೆಂಗಳೂರು ಅರಮನೆಯ ಯಾವುದೇ ಭಾಗಕ್ಕಾಗಿ, ನಷ್ಟಪರಿಹಾರವು ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ ಉಪಬಂಧನೆಗಳಿಗೆ ಅನುಗುಣವಾಗಿರತಕ್ಕದ್ದು ಹಾಗೂ ಯಾವುದೇ ಅಂಥ ಪರಿಹಾರವನ್ನು ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರಡಿಯಲ್ಲಿ ಪಾವತಿಸಬೇಕಾದ ಒಟ್ಟು ನಷ್ಟಪರಿಹಾರಕ್ಕೆ ಸರಿಹೊಂದಿಸತಕ್ಕದ್ದು.

**ವಿವರಣೆ:-** ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಅಧಿನಿಯಮ, 1961 (1963ರ ಕರ್ನಾಟಕ ಅಧಿನಿಯಮ 11)ರ ಪ್ರಕರಣ 14ಬಿ ಹಿನ್ನೆಲೆಯಲ್ಲಿ, ಯಾವುದೇ ಮೂಲಸೌಕರ್ಯ ಯೋಜನೆಗಳು ಅಥವಾ ಅದಕ್ಕೆ ಸಂಬಂಧಿಸಿದ ವಿಷಯಗಳಿಗಾಗಿ, ಯಾವುದೇ ಬಳಕೆಗೆ ಸಂಬಂಧಿಸಿದಂತೆ ನಷ್ಟಪರಿಹಾರವಾಗಿ ಯಾವುದೇ ವರ್ಗಾಯಿಸಬಹುದಾದ ಅಭಿವೃದ್ಧಿ ಹಕ್ಕುಗಳನ್ನು ಅಥವಾ ಅನ್ಯಥಾ ಪಾವತಿಸತಕ್ಕದ್ದಲ್ಲವೆಂದು ಸ್ಪಷ್ಟಪಡಿಸಲಾಗಿದೆ.][1]

.

(ಇ) "ಕಮೀಷನರ್" ಎಂಬುದು ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ 2ನೇ ಪ್ರಕರಣದ (4)ನೇ ಖಂಡದಲ್ಲಿ ಪರಿಭಾಷಿಸಲಾದಂತೆ ಅದೇ ಅರ್ಥವನ್ನು ಹೊಂದಿರತಕ್ಕದ್ದು.

[2][(ಎಫ್) [XXX]][2]

(ಜಿ) "ರಾಜ್ಯ ಸರ್ಕಾರ" ಎಂದರೆ ಕರ್ನಾಟಕ ಸರ್ಕಾರ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗೂ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಂತಹ ಕರ್ನಾಟಕ ಸರ್ಕಾರದ ಅಂಗಮಾಧ್ಯಮಗಳನ್ನೂ (instrumentalities) ಒಳಗೊಳ್ಳತಕ್ಕದ್ದು.

1. 2025ರ ಅಧಿನಿಯಮ ಸಂಖ್ಯೆ:35ರ ಮೂಲಕ ದಿ:27.01.2025ರಿಂದ ಜಾರಿಗೆ ಬರುವಂತೆ ಪ್ರತಿಯೋಜಿಸಲಾಗಿದೆ.
2. 2025ರ ಅಧಿನಿಯಮ ಸಂಖ್ಯೆ:35ರ ಮೂಲಕ ದಿ:27.01.2025ರಿಂದ ಜಾರಿಗೆ ಬರುವಂತೆ ಬಿಟ್ಟುಬಿಡಲಾಗಿದೆ.

**3. ಮೂಲಸೌಕರ್ಯ ಯೋಜನೆಗಾಗಿ ಭೂಮಿಯ ಬಳಕೆ.- (**1) ಯಾವುದೇ ಮೂಲಸೌಕರ್ಯ ಯೋಜನೆಯ ಉದ್ದೇಶಕ್ಕಾಗಿ, ರಾಜ್ಯ ಸರ್ಕಾರವು ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ 4ನೇ ಪ್ರಕರಣದಲ್ಲಿ ಬರುವ ಬೆಂಗಳೂರು ಅರಮನೆಯ ಯಾವುದೇ ಭಾಗವನ್ನು ಬಳಸಲು ಅಧಿಕಾರವನ್ನು ಹೊಂದಿರತಕ್ಕದ್ದು**.**

[1][(2) ಈ ಮೊದಲು ತೆಗೆದುಕೊಂಡ ಯಾವುದೇ ತೀರ್ಮಾನದಲ್ಲಿ ಏನೇ ಇದ್ದರೂ, ರಾಜ್ಯ ಸರ್ಕಾರವು (1)ನೇ ಉಪ-ಪ್ರಕರಣದಲ್ಲಿನ ಯಾವುದೇ ಮೂಲಸೌಕರ್ಯ ಯೋಜನೆಗೆ ಸಂಪೂರ್ಣವಾಗಿ ಅಥವಾ ಭಾಗಶಃವಾಗಿ ಮುಂದುವರೆಯದಿರಲು ಅಧಿಕಾರವನ್ನು ಹೊಂದಿರತಕ್ಕದ್ದು.][1]

(3) ರಾಜ್ಯ ಸರ್ಕಾರವು (2)ನೇ ಉಪಪ್ರಕರಣದಲ್ಲಿನ ಯಾವುದೇ ಮೂಲಸೌಕರ್ಯ ಯೋಜನೆಗೆ ಮುಂದುವರೆಯದಿರಲು ತೀರ್ಮಾನಿಸಿದಲ್ಲಿ, ಅದು,-

(ಎ) ಉಪಪ್ರಕರಣ (1)ರಡಿ ಬಳಸಲು ಉದ್ದೇಶಿಸಿರುವ ಆದರೆ ತರುವಾಯ ಉಪಪ್ರಕರಣ (2)ರಡಿ ಮುಂದುವರೆಯದಿರುವ ಅಥವಾ ಬಳಸದಿರುವ ಬೆಂಗಳೂರು ಅರಮನೆಯ ಭಾಗಾಂಶದ ಭಾಗವನ್ನು ಪೂರ್ವಸ್ಥಿತಿಗೆ ತರತಕ್ಕದ್ದು;

(ಬಿ) ಈ ಮೊದಲು ಅಂಥ ಭೂಮಿಯನ್ನು ಉಪಪ್ರಕರಣ (1)ರಡಿ ಬಳಸಲು ಉದ್ದೇಶಿಸಿರುವ ಆದರೆ ತರುವಾಯ ಉಪಪ್ರಕರಣ (2)ರಡಿ ಮುಂದುವರೆಯದಿರುವ ಅಥವಾ ಬಳಸದಿರುವ ಬೆಂಗಳೂರು ಅರಮನೆಯ ಭಾಗಾಂಶದ ಭಾಗದ ಸ್ವಾಧೀನವನ್ನು ಪೂರ್ವಸ್ಥಿತಿಗೆ ತರತಕ್ಕದ್ದು; ಮತ್ತು

(ಸಿ) (ಎ) ಮತ್ತು (ಬಿ)ಗಳಿಗಾಗಿನ ಒಟ್ಟಾರೆ ವೆಚ್ಚವನ್ನು ಭರಿಸತಕ್ಕದ್ದು.

(4) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರ ಕಾನೂನಿನಲ್ಲಿ ಏನೇ ಒಳಗೊಂಡಿದ್ದರೂ, (1)ನೇ ಉಪಪ್ರಕರಣದಡಿ ಬೆಂಗಳೂರು ಅರಮನೆಯ ಭಾಗಾಂಶದ ಯಾವುದೇ ಭಾಗವನ್ನು ರಾಜ್ಯ ಸರ್ಕಾರವು ಬಳಸಿದ್ದರೆ, 4ನೇ ಪ್ರಕರಣದಡಿ ಈ ಅಧಿನಿಯಮದ ಅನುಸಾರ ರಾಜ್ಯ ಸರ್ಕಾರವು ಕ್ಲೇಮುದಾರರಿಗೆ ನಷ್ಟಪರಿಹಾರವನ್ನು ಪಾವತಿಸತಕ್ಕದ್ದು.

[1][(5) ಈ ಅಧಿನಿಯಮದಲ್ಲಿ ಏನೇ ಒಳಗೊಂಡಿದ್ದರೂ, ಬೆಂಗಳೂರು ಅರಮನೆಯ ಯಾವುದೇ ಭಾಗದ ಸಂದರ್ಭದಲ್ಲಿ, ಈ ಅಧಿನಿಯಮವು ಜಾರಿಗೆ ಬರುವುದಕ್ಕೆ ಮೊದಲು ಮತ್ತು ಯಾವುದೇ ನ್ಯಾಯಾಲಯದ ಯಾವುದೇ ತೀರ್ಪು ಅಥವಾ ಆದೇಶವನ್ನು ಪಾಲಿಸುವಲ್ಲಿ ರಾಜ್ಯ ಸರ್ಕಾರದ ಯಾವುದೇ ನಿರ್ಧಾರದ ಅನುಸಾರವಾಗಿ ಯಾವುದೇ ನಷ್ಟಪರಿಹಾರವನ್ನು ಈಗಾಗಲೇ ಪಾವತಿಸಿದ್ದರೆ, ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರಡಿ ಪಾವತಿಸಬಹುದಾದ ನಷ್ಟಪರಿಹಾರದ ಪ್ರತಿಯಾಗಿ ಅದನ್ನು ಸರಿಹೊಂದಿಸತಕ್ಕದ್ದು.][1]

[2][(6) [XXX]][2]

1. 2025ರ ಅಧಿನಿಯಮ ಸಂಖ್ಯೆ:35ರ ಮೂಲಕ ದಿ:27.01.2025ರಿಂದ ಜಾರಿಗೆ ಬರುವಂತೆ ಪ್ರತಿಯೋಜಿಸಲಾಗಿದೆ.
2. 2025ರ ಅಧಿನಿಯಮ ಸಂಖ್ಯೆ:35ರ ಮೂಲಕ ದಿ:27.01.2025ರಿಂದ ಜಾರಿಗೆ ಬರುವಂತೆ ಬಿಟ್ಟುಬಿಡಲಾಗಿದೆ.

**4. ಬಳಕೆಗಾಗಿ ಸಂದಾಯ ಮಾಡಬಹುದಾದ ನಷ್ಟಪರಿಹಾರ.-** [1]**[**(1) ಈ ಅಧಿನಿಯಮದ ಉದ್ದೇಶಕ್ಕಾಗಿ, ಬಳಸಲಾದ ಬೆಂಗಳೂರು ಅರಮನೆಯ ಯಾವುದೇ ಭಾಗಕ್ಕಾಗಿ, ನಷ್ಟಪರಿಹಾರವನ್ನು ಈ ಅಧಿನಿಯಮದ 2ನೇ ಪ್ರಕರಣದ (ಡಿ) ಖಂಡದಲ್ಲಿ ಪರಿಭಾಷಿಸಿದಂತೆ ಪಾವತಿಸತಕ್ಕದ್ದು.

(2) ಈ ಅಧಿನಿಯಮದ 3ನೇ ಪ್ರಕರಣದ (1)ನೇ ಉಪಪ್ರಕರಣದಡಿ ಬಳಸಲಾದ ಬೆಂಗಳೂರು ಅರಮನೆಯ ಯಾವುದೇ ಭಾಗಕ್ಕಾಗಿನ ನಷ್ಟಪರಿಹಾರದ ಲೆಕ್ಕಾಚಾರದ ಉದ್ದೇಶಕ್ಕಾಗಿ, ಹಾಗೆ ಬಳಸಲಾದ ಭೂಮಿಗೆ ಪಾವತಿಸಬಹುದಾದ ನಷ್ಟ ಪರಿಹಾರದ ಪ್ರಮಾಣವು, ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996ರ 8ನೇ ಪ್ರಕರಣ ಮತ್ತು 9ನೇ ಪ್ರಕರಣದ ಅನುಸಾರ ಆರ್ಜಿಸಲಾದ ಒಟ್ಟು ಭೂಮಿಗೆ ಪಾವತಿಸಬೇಕಾದ ನಷ್ಟಪರಿಹಾರಕ್ಕೆ ಪ್ರಮಾಣಾನುಸಾರವಾಗಿರತಕ್ಕದ್ದು.

(3)ಕ್ಲೇಮುದಾರನಿಗೆ ಸಂದಾಯ ಮಾಡಬಹುದಾದ ನಷ್ಟಪರಿಹಾರವು ಮುಂದಿನಂತಿರತಕ್ಕದ್ದು:

(ಎ) ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ ಉಪಬಂಧಗಳಡಿ ಆರ್ಜಿಸಲಾದ ಒಟ್ಟು ಭೂಮಿಯ ಪ್ರತಿಯಾಗಿರುವಂತೆ ಬಳಸಲಾದ ಭೂ ವ್ಯಾಪ್ತಿಯ ಪ್ರಮಾಣಾನುಸಾರವಾಗಿರುವ (2)ನೇ ಉಪಪ್ರಕರಣದ ಪ್ರಕಾರ ಪ್ರಮಾಣಾನುಸಾರ ಮೌಲ್ಯದ ಮೊತ್ತ; ಮತ್ತು

(ಬಿ) ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ ಪ್ರಕರಣ 13ರಡಿ ಕಮೀಷನರನು ನಿರ್ಧರಿಸಬಹುದಾದಂತೆ ಅಂತಿಮ ನಷ್ಟ ಪರಿಹಾರದ ಪಾವತಿಗೆ ಸರಿಹೊಂದಿಸತಕ್ಕದ್ದು.][1]

(4) ಯಾವುದೇ ನ್ಯಾಯಾಲಯದ ಯಾವುದೇ ಆದೇಶ ಅಥವಾ ತೀರ್ಪು ಏನೇ ಇದ್ದರೂ, ಈ ಅಧಿನಿಯಮದ ಮೂಲಕ ನಿಯಮಿಸಲಾದುದಕ್ಕೆ ಹೊರತಾಗಿ ಕ್ಲೇಮುದಾರರು ಯಾವುದೇ ಇತರೆ ನಷ್ಟಪರಿಹಾರದ ಹಕ್ಕನ್ನು ಹೊಂದಿರತಕ್ಕದ್ದಲ್ಲ.

[2][(5) [XXX]][2]

1. 2025ರ ಅಧಿನಿಯಮ ಸಂಖ್ಯೆ:35ರ ಮೂಲಕ ದಿ:27.01.2025ರಿಂದ ಜಾರಿಗೆ ಬರುವಂತೆ ಪ್ರತಿಯೋಜಿಸಲಾಗಿದೆ.
2. 2025ರ ಅಧಿನಿಯಮ ಸಂಖ್ಯೆ:35ರ ಮೂಲಕ ದಿ:27.01.2025ರಿಂದ ಜಾರಿಗೆ ಬರುವಂತೆ ಬಿಟ್ಟುಬಿಡಲಾಗಿದೆ.

(6) ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ 8ನೇ ಪ್ರಕರಣ ಮತ್ತು 9ನೇ ಪ್ರಕರಣದೊಂದಿಗೆ ಅಸಂಗತವಾದ ನಷ್ಟಪರಿಹಾರದ ಸಂದರ್ಭದಲ್ಲಿ, ಕ್ಲೇಮುದಾರರು (3)ನೇ ಉಪಪ್ರಕರಣದಡಿ ಯಾವುದೇ ಅಂಥ ನಷ್ಟಪರಿಹಾರದ ಬಳಕೆಗೆ ನಷ್ಟಭರ್ತಿಗಾಗಿ ಸರ್ಕಾರಕ್ಕೆ ಹೊಣೆಗಾರರಾಗಿರತಕ್ಕದ್ದು.

(7) ಯಾವುದೇ ನ್ಯಾಯಾಲಯದ ಯಾವುದೇ ಆದೇಶ ಅಥವಾ ತೀರ್ಪಿಗೆ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರೆ ಕಾನೂನಿಗೆ ವಿರುದ್ಧವಾದುದು ಏನೇ ಇದ್ದರೂ, ಈ ಅಧಿನಿಯಮದೊಂದಿಗೆ ಓದಲಾದಂತೆ ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ 8ನೇ ಪ್ರಕರಣ ಮತ್ತು 9ನೇ ಪ್ರಕರಣದಲ್ಲಿ ನಿರ್ಧರಿಸಲಾದ ನಷ್ಟಪರಿಹಾರವು ಅಂತಿಮವಾಗಿರತಕ್ಕದ್ದು.

(8) ಈ ಅಧಿನಿಯಮದೊಂದಿಗೆ ಯಾವುದೇ ನ್ಯಾಯಾಲಯದ ಯಾವುದೇ ಆದೇಶ ಅಥವಾ ತೀರ್ಪಿನ ಯಾವುದೇ ಅಸಂಗತತೆಯ ಸಂದರ್ಭದಲ್ಲಿ, 3ನೇ ಪ್ರಕರಣದ (1)ನೇ ಉಪಪ್ರಕರಣದಡಿ

ಬಳಸಲಾದ ಭೂಮಿಗಳ ನಷ್ಟಪರಿಹಾರದ ನಿರ್ಧರಣೆಗಾಗಿ, ಈ ಅಧಿನಿಯಮದ ಉಪಬಂಧಗಳು ಪ್ರಭಾವಿಯಾಗಿರತಕ್ಕದ್ದು.

**5. ಕ್ಲೇಮುದಾರರ ನಡುವೆ ವಿವಾದಗಳು ಉದ್ಭವವಾದಾಗ ನಷ್ಟಪರಿಹಾರದ ಸಂದಾಯ.-** (1) ನಷ್ಟಪರಿಹಾರವನ್ನು ಕ್ಲೇಮುಮಾಡುವ ಉದ್ದೇಶಕ್ಕಾಗಿ ಕ್ಲೇಮುದಾರರ ನಡುವೆ ಯಾವುದೇ ವಿವಾದಗಳಾದ ಸಂದರ್ಭದಲ್ಲಿ, ರಾಜ್ಯ ಸರ್ಕಾರವು ಈ ಅಧಿನಿಯಮದಡಿ ನಿರ್ಧರಿಸಬಹುದಾದ ನಷ್ಟಪರಿಹಾರವನ್ನು ಕಮೀಷನರ್‌ನ ಮುಂದೆ ಠೇವಣಿ ಇರಿಸತಕ್ಕದ್ದು.

(2) ಸಕ್ಷಮ ಸಿವಿಲ್ ನ್ಯಾಯಾಲಯದ ಅಂತಿಮ ಡಿಕ್ರಿಯ ದೃಢೀಕೃತ ಪ್ರತಿಯನ್ನು ಕಮೀಷನರ್‌ಗೆ ಒದಗಿಸದೆ, ಕ್ಲೇಮುದಾರರ ನಡುವೆ ತಮ್ಮೊಳಗೆ ವಿವಾದಗಳು ಉದ್ಭವವಾದ ಸಂದರ್ಭದಲ್ಲಿ, ಯಾರೇ ಕ್ಲೇಮುದಾರನು ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996ರ 13ನೇ ಪ್ರಕರಣದಡಿ ಕಮೀಷನರ್‌ನಿಂದ ಯಾವುದೇ ನಷ್ಟಪರಿಹಾರವನ್ನು ಹಿಂಪಡೆಯಲು ಹಕ್ಕುಳ್ಳವನಾಗಿರತಕ್ಕದ್ದಲ್ಲ:

ಪರಂತು, ತಮ್ಮೊಳಗಿನ ವಿವಾದಗಳ ಇತ್ಯರ್ಥದ ಅಂತಿಮ ಡಿಕ್ರಿಯು ಯಾರ ಪರವಾಗಿದೆಯೋ ಅಂಥ ಕ್ಲೇಮುದಾರನಿಗೆ ಕಮೀಷನರ್‌ನು ನಷ್ಟಪರಿಹಾರವನ್ನು ಬಿಡುಗಡೆಗೊಳಿಸುವ ಮೊದಲು, ಕಮೀಷನರ್‌ನು ಹಿತಾಸಕ್ತಿಯುಳ್ಳ ಯಾರೇ ವ್ಯಕ್ತಿಯ ಮೌಖಿಕ ವಿಚಾರಣೆಗೆ ಅವಕಾಶವನ್ನು ನೀಡತಕ್ಕದ್ದು.

ಮತ್ತು ಪರಂತು, ಅಪೀಲು ವ್ಯವಹರಣೆಗಳಲ್ಲಿ ಯಾವುದೇ ನ್ಯಾಯಾಲಯ ಅಂತಿಮ ಡಿಕ್ರಿಯ ಕಾರ್ಯಾಚರಣೆಯ ಮೇಲೆ ತಡೆಯಾಜ್ಞೆ ನೀಡಿದಲ್ಲಿ, ಕಮಿಷನರ್‌ನು ಯಾರೇ ಕ್ಲೇಮುದಾರನಿಗೆ ಯಾವುದೇ ನಷ್ಟಪರಿಹಾರವನ್ನು ಬಿಡುಗಡೆಗೊಳಿಸತಕ್ಕದ್ದಲ್ಲ.

(3) ಕಮೀಷನರ್, ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1966ರ ಕರ್ನಾಟಕ ಅಧಿನಿಯಮ 18)ರ 20ನೇ ಪ್ರಕರಣದ ಅನುಸಾರ ಕ್ಲೇಮುದಾರನು ಅಂಥ ನಷ್ಟಪರಿಹಾರದ ನ್ಯಾಯಯುತ ಸ್ವೀಕೃತದಾರನೆಂದು ಪೂರ್ಣವಾಗಿ ಮನದಟ್ಟಾದ ಮೇಲೆ ಮಾತ್ರ (2)ನೇ ಉಪಪ್ರಕರಣದ ನಿಬಂಧನೆಗಳಡಿ ಕ್ಲೇಮುದಾರನಿಗೆ ನಷ್ಟಪರಿಹಾರವನ್ನು ವಿತರಿಸತಕ್ಕದ್ದು.

(4) ಉಪಪ್ರಕರಣ (2) ಮತ್ತು (3)ರಡಿ ಕಮೀಷನರ್‌ನ ತೀರ್ಮಾನವು ಅಂತಿಮವಾಗಿರತಕದ್ದು.

**6. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.-** (1) ಈ ಅಧಿನಿಯಮದ ಅನುಸರಣೆಯಲ್ಲಿ ಸದ್ಭಾವನೆಯಿಂದ ಏನನ್ನಾದರೂ ಮಾಡಿರುವ ಅಥವಾ ಮಾಡಲು ಉದ್ದೇಶಿಸಿದ ರಾಜ್ಯ ಸರ್ಕಾರದ ಯಾರೇ ಅಧಿಕಾರಿ ಅಥವಾ ಅದರ ಅಂಗಮಾಧ್ಯಮಗಳ ವಿರುದ್ಧ ಯಾವುದೇ ಸಿವಿಲ್ ಅಥವಾ ಕ್ರಿಮಿನಲ್ ವ್ಯವಹರಣೆಗಳನ್ನು ಹೂಡತಕ್ಕದ್ದಲ್ಲ.

(2) ಯಾವುದೇ ನ್ಯಾಯಾಲಯದ ಯಾವುದೇ ಆದೇಶ ಅಥವಾ ತೀರ್ಪು ಏನೇ ಇದ್ದರೂ, ಈ ಅಧಿನಿಯಮದ ಅನುಸರಣೆಯಲ್ಲಿ ಸದ್ಭಾವನೆಯಿಂದ ಏನನ್ನಾದರೂ ಮಾಡಿರುವ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯದ ಮೇರೆಗೆ ರಾಜ್ಯ ಸರ್ಕಾರದ ಯಾರೇ ಅಧಿಕಾರಿ ಅಥವಾ ಅದರ ಅಂಗಮಾಧ್ಯಮಗಳು ಯಾವುದೇ ಶಿಕ್ಷೆಗೆ ಹೊಣೆಯಾಗತಕ್ಕದ್ದಲ್ಲ.

**7. ಅಧಿನಿಯಮದ ಅಧ್ಯಾರೋಹಿ ಪರಿಣಾಮ.-** ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಅಧಿನಿಯಮದಲ್ಲಿ ಏನೇ ಒಳಗೊಂಡಿದ್ದರೂ**,** ಈ ಅಧಿನಿಯಮಕ್ಕೆ ಅಸಂಗತವಾಗಿರುವುದಾವುದೂ**,** ಬೆಂಗಳೂರು ಅರಮನೆಗೆ ಅನ್ವಯವಾಗತಕ್ಕದ್ದಲ್ಲ**.**

**8. ನಿರಸನ ಮತ್ತು ಉಳಿಸುವಿಕೆಗಳು.-** (1) ಬೆಂಗಳೂರು ಅರಮನೆ (ಭೂ ಬಳಕೆ ಮತ್ತು ನಿಯಂತ್ರಣ) ಅಧ್ಯಾದೇಶ, 2025 (2025ರ ಕರ್ನಾಟಕ ಅಧ್ಯಾದೇಶ ಸಂ.01)ನ್ನು ಈ ಮೂಲಕ ನಿರಸನಗೊಳಿಸಲಾಗಿದೆ.

**(2**) ಅಂಥ ನಿರಸನವು ಏನೇ ಒಳಗೊಂಡಿದ್ದರೂ ಬೆಂಗಳೂರು ಅರಮನೆ (ಭೂ ಬಳಕೆ ಮತ್ತು ನಿಯಂತ್ರಣ) ಅಧ್ಯಾದೇಶ, 2025 (2025ರ ಕರ್ನಾಟಕ ಅಧ್ಯಾದೇಶ ಸಂ.01)ರ ಅಡಿಯಲ್ಲಿ ತಿದ್ದುಪಡಿಯಾದಂತೆ ಏನೇ ಮಾಡಿದ್ದರೂ ಅಥವಾ ಯಾವುದೇ ಕ್ರಮವನ್ನು ಕೈಗೊಂಡಿದ್ದರೂ ಈ ಅಧಿನಿಯಮದ ಅಡಿಯಲ್ಲಿ ತಿದ್ದುಪಡಿಯಾದಂತೆ ಮೂಲ ಅಧಿನಿಯಮದಲ್ಲಿ ಮಾಡಲಾಗಿದೆ ಅಥವಾ ಕೈಗೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು.

**ಥಾವರ್‌ಚಂದ್ ಗೆಹ್ಲೋಟ್**
**ಕರ್ನಾಟಕದ ರಾಜ್ಯಪಾಲರು**

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಜಿ. ಶ್ರೀಧರ್**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.

## 2025 ರ ಕರ್ನಾಟಕ ಅಧಿನಿಯಮ ಸಂಖ್ಯೆ: 35

(2025ರ ಏಪ್ರಿಲ್ ತಿಂಗಳ 15ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಬೆಂಗಳೂರು ಅರಮನೆ (ಭೂ ಬಳಕೆ ಮತ್ತು ನಿಯಂತ್ರಣ) (ತಿದ್ದುಪಡಿ) ಅಧಿನಿಯಮ, 2025

(2025ರ ಏಪ್ರಿಲ್ ತಿಂಗಳ 10ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮೋದನೆಯನ್ನು ಪಡೆಯಲಾಗಿದೆ)

ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996ರಡಿಯಲ್ಲಿ ಸ್ವಾಧೀನಪಡಿಸಿಕೊಂಡ ಭೂಮಿಯ ಭಾಗದಲ್ಲಿ 15 ಎಕರೆಗಳು 17.5 ಗುಂಟೆಗಳ ವ್ಯಾಪ್ತಿಯಷ್ಟನ್ನು ಮೂಲಸೌಕರ್ಯ ಯೋಜನೆಗೆ ಬಳಸಿಕೊಳ್ಳಲು ಉದ್ದೇಶಿಸಲಾಗಿತ್ತು, ಅದರಲ್ಲಿ 1217.41 ಚದರ ಮೀಟರ್‌ಗಳಷ್ಟನ್ನು ಮಾತ್ರ ವಾಸ್ತವವಾಗಿ ಬಳಸಲಾಗಿರುವುದರಿಂದ;

ಮತ್ತು ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಅಧಿನಿಯಮ, 1961 (1963ರ ಕರ್ನಾಟಕ ಅಧಿನಿಯಮ 11)ರ 14ಬಿ ಪ್ರಕರಣದಡಿಯಲ್ಲಿನ ಯಾವುದೇ ವರ್ಗಾಯಿಸಬಹುದಾದ ಅಭಿವೃದ್ಧಿ ಹಕ್ಕುಗಳು, ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ ಅನುಸಾರ ಸರ್ಕಾರದಲ್ಲಿ ನಿಹಿತವಾಗಿರುವ ಭೂಮಿಗೆ ಅನ್ವಯಿಸುವುದಿಲ್ಲವಾದ್ದರಿಂದ;

ಮತ್ತು, ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ ಅನುಸೂಚಿ Iರಲ್ಲಿ ವಿವರಿಸಲಾದ ಭೂಮಿಯ ಯಾವುದೇ ಭಾಗವನ್ನು ಬಳಸಿಕೊಳ್ಳಲು ರಾಜ್ಯ ಸರ್ಕಾರಕ್ಕೆ ಅಧಿಕಾರ ನೀಡುವುದು ಅಗತ್ಯವಾಗಿರುವುದರಿಂದ;

ಮತ್ತು ರಾಜ್ಯ ಸರ್ಕಾರವು ಯಾವುದೇ ಮೂಲಸೌಕರ್ಯ ಯೋಜನೆಗಾಗಿ ಭೂಮಿಯ ಭಾಗವನ್ನು ಬಳಸಲಾಗಿದ್ದರೆ, ಯಾವುದೇ ಅಂಥ ಮೂಲಸೌಕರ್ಯ ಯೋಜನೆಯಲ್ಲಿ ಪೂರ್ಣವಾಗಿ ಅಥವಾ ಭಾಗಶಃ ಮುಂದುವರಿಯದಿರಲು ಸಾರ್ವಜನಿಕ ಹಿತಾಸಕ್ತಿಯಲ್ಲಿ ಹಾಗೆ ಸಲಹೆ ನೀಡಲಾಗಿದ್ದರೆ, ಅದು ಅದನ್ನು ತೀರ್ಮಾನಿಸಬಹುದಾಗಿರುವುದರಿಂದ;

ಮತ್ತು ರಾಜ್ಯ ಸರ್ಕಾರವು ಅಗತ್ಯವಿದ್ದಲ್ಲಿ, ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ ಅನುಸೂಚಿ Iರಲ್ಲಿ ವಿವರಿಸಿದ ಭೂಮಿಯನ್ನು ಒಳಗೊಂಡು, ರಾಜ್ಯ ಸರ್ಕಾರದಲ್ಲಿ ನಿಹಿತವಾಗಿರುವ ಭೂಮಿಯ ಭಾಗಕ್ಕೆ ಸಂಬಂಧಿಸಿದಂತೆ ಯಾವುದೇ ಮೂಲಸೌಕರ್ಯ ಯೋಜನೆಯಲ್ಲಿ ಮುಂದುವರಿಯಲು ಪರಿಗಣಿಸಬಹುದಾಗಿರುವುದರಿಂದ;

ಹಾಗೂ ಯಾವುದೇ ಸದರಿ ಬಳಕೆಗಾಗಿ ಪಾವತಿಸಲಾದ ಯಾವುದೇ ನಷ್ಟಪರಿಹಾರವನ್ನು, ವಾಸ್ತವಿಕವಾಗಿ ಬಳಸಲಾದ ಪ್ರದೇಶಕ್ಕೆ ಸಂಬಂಧಿಸಿದಂತೆ, ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ 8ನೇ ಪ್ರಕರಣದಲ್ಲಿರುವಂತೆ ಪಾವತಿಸಬೇಕಾದ ಮೊತ್ತಕ್ಕೆ ಅನುಗುಣವಾಗಿ ಲೆಕ್ಕಹಾಕುವುದು, ಮತ್ತು ಯಾವುದೇ ಅಂಥ ಪಾವತಿಸತಕ್ಕ ನಷ್ಟಪರಿಹಾರವನ್ನು, ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ ಅಡಿಯಲ್ಲಿನ ಒಟ್ಟಾರೆ ನಷ್ಟಪರಿಹಾರದಿಂದ ಪ್ರಮಾಣಾನುಸಾರವಾಗಿ ಕಟಾವಣೆಯಾಗತಕ್ಕದ್ದು;

ಮತ್ತು ಈಗ ಈ ಪ್ರಸ್ತಾವಿತ ತಿದ್ದುಪಡಿ ಅಧಿನಿಯಮವು ಮೇಲಿನ ಉದ್ದೇಶಗಳನ್ನು ಸಾಧಿಸಲು ಮತ್ತು ಬೆಂಗಳೂರು ಅರಮನೆ (ಭೂ ಬಳಕೆ ಮತ್ತು ನಿಯಂತ್ರಣ) ಅಧಿನಿಯಮ, 2025 (2025ರ ಕರ್ನಾಟಕ ಅಧಿನಿಯಮ 14)ನ್ನು ಅದಕ್ಕೆ ಅನುಗುಣವಾಗಿ ತಿದ್ದುಪಡಿ ಮಾಡಲು ಉದ್ದೇಶಿಸಿದೆ.

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು, ಅನ್ವಯ ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಬೆಂಗಳೂರು ಅರಮನೆ (ಭೂ ಬಳಕೆ ಮತ್ತು ನಿಯಂತ್ರಣ) (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ಬೆಂಗಳೂರು ಅರಮನೆಗೆ ಅನ್ವಯವಾಗತಕ್ಕದ್ದು.

(3) ಇದು 27ನೇ ಜನವರಿ 2025ರಿಂದ ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

**2. ಪ್ರಕರಣ 2ರ ತಿದ್ದುಪಡಿ.-** ಬೆಂಗಳೂರು ಅರಮನೆ (ಭೂ ಬಳಕೆ ಮತ್ತು ನಿಯಂತ್ರಣ) ಅಧಿನಿಯಮ, 2025 (2025ರ ಕರ್ನಾಟಕ ಅಧಿನಿಯಮ 14)ರ (ಇಲ್ಲಿ ಇನ್ನುಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ) 2ನೇ ಪ್ರಕರಣದಲ್ಲಿ,-

(i) (ಡಿ) ಖಂಡದ ಬದಲಿಗೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"(ಡಿ) "ನಷ್ಟಪರಿಹಾರ"ವು ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ 8ನೇ ಪ್ರಕರಣದಲ್ಲಿರುವ ಅದೇ ಅರ್ಥವನ್ನು ಹೊಂದಿರತಕ್ಕದ್ದು; ಮತ್ತು, ಬಳಸಿರುವ ಅಥವಾ ಬಳಸಲಾಗುವ ಬೆಂಗಳೂರು ಅರಮನೆಯ ಯಾವುದೇ ಭಾಗಕ್ಕಾಗಿ, ನಷ್ಟಪರಿಹಾರವು ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ ಉಪಬಂಧನೆಗಳಿಗೆ ಅನುಗುಣವಾಗಿರತಕ್ಕದ್ದು ಹಾಗೂ ಯಾವುದೇ ಅಂಥ ಪರಿಹಾರವನ್ನು ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ,

1996 (1996ರ ಕರ್ನಾಟಕ ಅಧಿನಿಯಮ 18)ರಡಿಯಲ್ಲಿ ಪಾವತಿಸಬೇಕಾದ ಒಟ್ಟು ನಷ್ಟಪರಿಹಾರಕ್ಕೆ ಸರಿಹೊಂದಿಸತಕ್ಕದ್ದು.

**ವಿವರಣೆ:-** ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಅಧಿನಿಯಮ, 1961 (1963ರ ಕರ್ನಾಟಕ ಅಧಿನಿಯಮ 11)ರ ಪ್ರಕರಣ 14ಬಿ ಹಿನ್ನೆಲೆಯಲ್ಲಿ, ಯಾವುದೇ ಮೂಲಸೌಕರ್ಯ ಯೋಜನೆಗಳು ಅಥವಾ ಅದಕ್ಕೆ ಸಂಬಂಧಿಸಿದ ವಿಷಯಗಳಿಗಾಗಿ, ಯಾವುದೇ ಬಳಕೆಗೆ ಸಂಬಂಧಿಸಿದಂತೆ ನಷ್ಟಪರಿಹಾರವಾಗಿ ಯಾವುದೇ ವರ್ಗಾಯಿಸಬಹುದಾದ ಅಭಿವೃದ್ಧಿ ಹಕ್ಕುಗಳನ್ನು ಅಥವಾ ಅನ್ಯಥಾ ಪಾವತಿಸತಕ್ಕದ್ದಲ್ಲವೆಂದು ಸ್ಪಷ್ಟಪಡಿಸಲಾಗಿದೆ.

(ii) (ಎಫ್) ಖಂಡವನ್ನು ಬಿಟ್ಟುಬಿಡತಕ್ಕದ್ದು.

**3. ಪ್ರಕರಣ 3ರ ತಿದ್ದುಪಡಿ.-** ಮೂಲ ಅಧಿನಿಯಮದ 3ನೇ ಪ್ರಕರಣದಲ್ಲಿ,-

(i) (2)ನೇ ಉಪ-ಪ್ರಕರಣದ ಬದಲಿಗೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"(2) ಈ ಮೊದಲು ತೆಗೆದುಕೊಂಡ ಯಾವುದೇ ತೀರ್ಮಾನದಲ್ಲಿ ಏನೇ ಇದ್ದರೂ, ರಾಜ್ಯ ಸರ್ಕಾರವು (1)ನೇ ಉಪ-ಪ್ರಕರಣದಲ್ಲಿನ ಯಾವುದೇ ಮೂಲಸೌಕರ್ಯ ಯೋಜನೆಗೆ ಸಂಪೂರ್ಣವಾಗಿ ಅಥವಾ ಭಾಗಶಃವಾಗಿ ಮುಂದುವರೆಯದಿರಲು ಅಧಿಕಾರವನ್ನು ಹೊಂದಿರತಕ್ಕದ್ದು."

(ii) (5)ನೇ ಉಪ-ಪ್ರಕರಣದ ಬದಲಿಗೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"(5) ಈ ಅಧಿನಿಯಮದಲ್ಲಿ ಏನೇ ಒಳಗೊಂಡಿದ್ದರೂ, ಬೆಂಗಳೂರು ಅರಮನೆಯ ಯಾವುದೇ ಭಾಗದ ಸಂದರ್ಭದಲ್ಲಿ, ಈ ಅಧಿನಿಯಮವು ಜಾರಿಗೆ ಬರುವುದಕ್ಕೆ ಮೊದಲು ಮತ್ತು ಯಾವುದೇ ನ್ಯಾಯಾಲಯದ ಯಾವುದೇ ತೀರ್ಪು ಅಥವಾ ಆದೇಶವನ್ನು ಪಾಲಿಸುವಲ್ಲಿ ರಾಜ್ಯ ಸರ್ಕಾರದ ಯಾವುದೇ ನಿರ್ಧಾರದ ಅನುಸಾರವಾಗಿ ಯಾವುದೇ ನಷ್ಟಪರಿಹಾರವನ್ನು ಈಗಾಗಲೇ ಪಾವತಿಸಿದ್ದರೆ, ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರಡಿ ಪಾವತಿಸಬಹುದಾದ ನಷ್ಟಪರಿಹಾರದ ಪ್ರತಿಯಾಗಿ ಅದನ್ನು ಸರಿಹೊಂದಿಸತಕ್ಕದ್ದು."

(iii) (6)ನೇ ಉಪ-ಪ್ರಕರಣವನ್ನು ಬಿಟ್ಟುಬಿಡತಕ್ಕದ್ದು.

**4. ಪ್ರಕರಣ 4ರ ತಿದ್ದುಪಡಿ.-** ಮೂಲ ಅಧಿನಿಯಮದ 4ನೇ ಪ್ರಕರಣದಲ್ಲಿ,-

(i) (1)ನೇ ಉಪ-ಪ್ರಕರಣದ ಬದಲಿಗೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"(1) ಈ ಅಧಿನಿಯಮದ ಉದ್ದೇಶಕ್ಕಾಗಿ, ಬಳಸಲಾದ ಬೆಂಗಳೂರು ಅರಮನೆಯ ಯಾವುದೇ ಭಾಗಕ್ಕಾಗಿ, ನಷ್ಟಪರಿಹಾರವನ್ನು ಈ ಅಧಿನಿಯಮದ 2ನೇ ಪ್ರಕರಣದ (ಡಿ) ಖಂಡದಲ್ಲಿ ಪರಿಭಾಷಿಸಿದಂತೆ ಪಾವತಿಸತಕ್ಕದ್ದು.";

(ii) (2)ನೇ ಉಪ-ಪ್ರಕರಣದ ಬದಲಿಗೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

(2) ಈ ಅಧಿನಿಯಮದ 3ನೇ ಪ್ರಕರಣದ (1)ನೇ ಉಪಪ್ರಕರಣದಡಿ ಬಳಸಲಾದ ಬೆಂಗಳೂರು ಅರಮನೆಯ ಯಾವುದೇ ಭಾಗಕ್ಕಾಗಿನ ನಷ್ಟಪರಿಹಾರದ ಲೆಕ್ಕಾಚಾರದ ಉದ್ದೇಶಕ್ಕಾಗಿ, ಹಾಗೆ ಬಳಸಲಾದ ಭೂಮಿಗೆ ಪಾವತಿಸಬಹುದಾದ ನಷ್ಟ ಪರಿಹಾರದ ಪ್ರಮಾಣವು, ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996ರ 8ನೇ ಪ್ರಕರಣ ಮತ್ತು 9ನೇ ಪ್ರಕರಣದ ಅನುಸಾರ ಆರ್ಜಿಸಲಾದ ಒಟ್ಟು ಭೂಮಿಗೆ ಪಾವತಿಸಬೇಕಾದ ನಷ್ಟಪರಿಹಾರಕ್ಕೆ ಪ್ರಮಾಣಾನುಸಾರವಾಗಿರತಕ್ಕದ್ದು."

(iii) (3)ನೇ ಉಪ-ಪ್ರಕರಣದ ಬದಲಿಗೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

(3) ಕ್ಲೇಮುದಾರನಿಗೆ ಸಂದಾಯ ಮಾಡಬಹುದಾದ ನಷ್ಟಪರಿಹಾರವು ಮುಂದಿನಂತಿರತಕ್ಕದ್ದು:

(ಎ) ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ ಉಪಬಂಧಗಳಡಿ ಆರ್ಜಿಸಲಾದ ಒಟ್ಟು ಭೂಮಿಯ ಪ್ರತಿಯಾಗಿರುವಂತೆ ಬಳಸಲಾದ ಭೂ ವ್ಯಾಪ್ತಿಯ ಪ್ರಮಾಣಾನುಸಾರವಾಗಿರುವ (2)ನೇ ಉಪಪ್ರಕರಣದ ಪ್ರಕಾರ ಪ್ರಮಾಣಾನುಸಾರ ಮೌಲ್ಯದ ಮೊತ್ತ; ಮತ್ತು

(ಬಿ) ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1996 (1996ರ ಕರ್ನಾಟಕ ಅಧಿನಿಯಮ 18)ರ ಪ್ರಕರಣ 13ರಡಿ ಕಮೀಷನರನು ನಿರ್ಧರಿಸಬಹುದಾದಂತೆ ಅಂತಿಮ ನಷ್ಟ ಪರಿಹಾರದ ಪಾವತಿಗೆ ಸರಿಹೊಂದಿಸತಕ್ಕದ್ದು.

(iv) (5)ನೇ ಉಪ-ಪ್ರಕರಣವನ್ನು ಬಿಟ್ಟುಬಿಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಜಿ. ಶ್ರೀಧರ್**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.